ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 105
ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ ಅರಳಿ
ಉತ್ತರಿಸುವ ದಿನಾಂಕ : 15/07/2019
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಬೀದರ್ ಜಿಲ್ಲೆಯಲ್ಲಿ ಇಲಾಖೆಯ ನಿವೇಶನವಿದ್ದರೂ ಬಾಡಿಗೆ ಕಟ್ಟಡದಲ್ಲಿ ವಿದ್ಯಾರ್ಥಿ ನಿಲಯಗಳನ್ನು ನಡೆಸುತ್ತಿರುವುದಕ್ಕೆ ಕಾರಣವೇನು; ಖಾಲಿ ಇದ್ದ ನಿವೇಶನಗಳಲ್ಲಿ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಟ್ಟುವುದು ಯಾವಾಗ; ವಿಳಂಬವಾಗುವುದಕ್ಕೆ ಕಾರಣಗಳೇನು;</td><td>ಬೀದರ್ ಜಿಲ್ಲೆಯಲ್ಲಿನ ವಿದ್ಯಾರ್ಥಿನಿಲಯಗಳ ವಿವರಗಳನ್ನು ಈ ಕೆಳಗೆ ಮಂಡಿಸಿದೆ.
<table>
<tr><th>ಕ್ರ.ಸಂ</th><th>ವಸತಿ ನಿಲಯಗಳ ವಿವರ</th><th>ಸಮಾಜ ಕಲ್ಯಾಣ ಇಲಾಖೆ</th><th>ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ</th></tr>
<tr><td>01</td><td>ವಿದ್ಯಾರ್ಥಿನಿಲಯಗಳ ಸಂಖ್ಯೆ</td><td>61</td><td>10</td></tr>
<tr><td>02</td><td>ಸ್ವಂತ ಕಟ್ಟಡದಲ್ಲಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ</td><td>48</td><td>03</td></tr>
<tr><td>03</td><td>ಬಾಡಿಗೆ ಕಟ್ಟಡದಲ್ಲಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ</td><td>13</td><td>07</td></tr>
<tr><td>04</td><td>ಕಟ್ಟಡ ನಿರ್ಮಾಣ ಕೈಗೊಳ್ಳಲಾದ ವಿದ್ಯಾರ್ಥಿನಿಲಯಗಳ ಸಂಖ್ಯೆ</td><td>05</td><td>04</td></tr>
<tr><td>05</td><td>ಟೆಂಡರ್ ಕರೆಯಲಾದ ವಿದ್ಯಾರ್ಥಿನಿಲಯಗಳ ಸಂಖ್ಯೆ</td><td>04</td><td>-</td></tr>
<tr><td>06</td><td>ನಿವೇಶನ ಲಭ್ಯವಿದ್ದು ಕೈಗೊಳ್ಳಬೇಕಾದ ಕಾಮಗಾರಿಗಳ ಸಂಖ್ಯೆ</td><td>04</td><td>-</td></tr>
<tr><td>07</td><td>ನಿವೇಶನ ಪಡೆಯಬೇಕಾದ ವಿದ್ಯಾರ್ಥಿನಿಲಯಗಳ ಸಂಖ್ಯೆ</td><td>--</td><td>03</td></tr>
</table>
ನಿವೇಶನ ಲಭ್ಯವಿಲ್ಲದೇ ಇರುವ ವಸತಿ ನಿಲಯಗಳಿಗೆ ನಿವೇಶನ ಲಭ್ಯವಾದ ನಂತರ ಅನುದಾನದ ಲಭ್ಯತೆಗನುಗುಣವಾಗಿ ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.</td></tr>
</table>

ಆ	ಬೀದರ್ ಜಿಲ್ಲೆಯ ಬೀದರ್ ನಗರದ ಜನವಾಡ ರಸ್ತೆಯಲ್ಲಿರುವ ವಿದ್ಯಾರ್ಥಿ ನಿಲಯದ ಕಟ್ಟಡವನ್ನು ಹೊಸ ಕಟ್ಟಡ ನಿರ್ಮಾಣ ಮಾಡಲು ಕೆಡವಿದ್ದು, ಇಲ್ಲಿಯವರೆಗೂ ಹೊಸ ಕಟ್ಟಡ ನಿರ್ಮಾಣವಾಗದಿರಲು ಕಾರಣವೇನು?	ಬೀದರ್ ನಗರದ ಜನವಾಡ ರಸ್ತೆಯಲ್ಲಿರುವ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ರೂ.686.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕ.ವ.ಶಿ.ಸಂ.ಸಂಘದ ವತಿಯಿಂದ ಕೈಗೊಳ್ಳಲು ಟೆಂಡರ್ ಕರೆಯಲಾಗಿದೆ. ಈ ಟೆಂಡರ್ ಪ್ರಕ್ರಿಯೆಯಲ್ಲಿ ಗುತ್ತಿಗೆದಾರರನ್ನು ಅಂತಿಮಗೊಳಿಸಿದ ನಂತರ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಸಕಇ 152 ಪಕವಿ 2019

(ಪ್ರಿಯಾಂಕ್ ಖರ್ಗೆ)
ಸಮಾಜ ಕಲ್ಯಾಣ ಸಚಿವರು